# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 498 (483) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಪಿ.ಹೆಚ್ ಪೂಜಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 11.12.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | 2020-25ರ ಸಾಲಿನಲ್ಲಿ ರಾಜ್ಯದಲ್ಲಿ ಕೈಗಾರಿಕಾ ನೀತಿಯಲ್ಲಿ 5 ಲಕ್ಷ ಕೋಟಿ ರೂ. ಗಳನ್ನು ಬಂಡವಾಳ ಹೂಡಿಕೆಯೊಂದಿಗೆ ಒಟ್ಟು 20 ಲಕ್ಷ ಉದ್ಯೋಗ ಯೋಜನೆಯನ್ನು ಹಮ್ಮಿಕೊಂಡಿದರು ಸದರಿ ಯೋಜನೆಯ ಅನುಸಾರ ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಯಾಗದೇ ಇರುವುದರಿಂದ ನಿರುದ್ಯೋಗಿಗಳ ನೋವು ಸರ್ಕಾರದ ಗಮನಕ್ಕೆ ಬಂದಿದೆಯೇ; | 2020-25 ಕೈಗಾರಿಕಾ ನೀತಿಯಲ್ಲಿಕೋವಿಡ್‌ನಂತಹ ಸವಾಲಿನ ಸಮಯದಲ್ಲೂ ರೂ.5,00,000 ಕೋಟಿ ಗುರಿಗೆ ಎದುರಾಗಿ ರೂ 5,00,360 ಕೋಟಿ ಮೊತ್ತದ ಹೂಡಿಕೆಯನ್ನು 2200 ಘಟಕಗಳ ಸಂಬಂಧ ಅನುಮೋದಿಸಲಾಗಿತ್ತು ಹಾಗೂ 7,63,428 ಜನರಿಗೆ ಉದ್ಯೋಗ ನಿರೀಕ್ಷಿಸಲಾಗಿದೆ.<br><br>ಆಗಸ್ಟ 2020 ರಿಂದ ಸೆಪ್ಟೆಂಬರ್ 2024ರವರೆಗೆ ಭಾರತ ಸರ್ಕಾರದ ಉದ್ಯಮ್ ಪೋರ್ಟಲ್‌ನಲ್ಲಿ 3,95,603 ತಯಾರಿಕಾ ಎಂಎಸ್ಎಂಇ ಉದ್ಯಮಗಳು ನೋಂದಣಿಯಾಗಿವೆ. |
| ಆ | ಹಾಗಿದ್ದಲ್ಲಿ ರಾಜಧಾನಿ ಬೆಂಗಳೂರಿನಲ್ಲಿ ಮಾತ್ರವಲ್ಲದೇ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅದರಲ್ಲೂ ಮುಖ್ಯವಾಗಿ ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸಲಾಗುವುದೇ; | ➢ 2025-30 ಕೈಗಾರಿಕಾ ನೀತಿಯು ರಾಜ್ಯದ ಸಮಗ್ರ ಅಭಿವೃದ್ಧಿ ಗುರಿಯೊಂದಿಗೆ ಬೆಂಗಳೂರಿನಿಂದ ಹೊರಗಡೆ ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.<br><br>➢ ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ನೀತಿಯಲ್ಲಿ ರಾಜ್ಯದ ಜಿಲ್ಲೆಗಳನ್ನು ಮೂರು ವಲಯಗಳಾಗಿ ವರ್ಗೀಕರಿಸಿದೆ. ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕುಗಳು/ಜಿಲ್ಲೆಗಳನ್ನು ವಲಯ-1 ಮತ್ತು ವಲಯ-2 ರಲ್ಲಿ ಹಾಗೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳನ್ನು ವಲಯ-3 ರಲ್ಲಿ ವರ್ಗೀಕರಿಸಲಾಗಿದೆ.<br><br>➢ ರಾಜ್ಯದ ಸಮತೋಲಿನ ಕೈಗಾರಿಕಾ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಕೈಗಾರಿಕೆಯಲ್ಲಿ ಹಿಂದುಳಿದ ಜಿಲ್ಲಗಳು/ತಾಲ್ಲೂಕುಗಳಲ್ಲಿ ಹೂಡಿಕೆಗಳನ್ನು ಆಕರ್ಷಿಸಲು ಹೆಚ್ಚಿನ ಪ್ರೋತ್ಸಾಹವನ್ನು ನೀಡಲಾಗುತ್ತಿದೆ. |
| ಇ | ಉದ್ಯೋಗಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೃಷ್ಟಿಸಿ, ಸೃಜನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು) | |

| | | |
|---|---|---|
| | | ಕೈಗಾರಿಕಾ ನೀತಿ 2025-2030ರ ಅಡಿಯಲ್ಲಿ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಪಡೆಯುವ ಕೈಗಾರಿಕೆಗಳು ಒಟ್ಟು ಕನಿಷ್ಠ 70% (ಒಟ್ಟುಆಧರಿಸಿ) ಉದ್ಯೋಗಾವಕಾಶ ಕನ್ನಡಿಗರಿಗೆ ನೀಡಬೇಕು ಹಾಗೂ ಗ್ರೂಪ್-ಡಿ ಉದ್ಯೋಗಗಳು 100% ಕನ್ನಡಿಗರಿಗೆ ನೀಡಬೇಕು. |

ಸಿಐ 356 ಎಸ್‌ಪಿಐ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು